# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 642
ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 13.12.2024
ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕೃಷಿ ತಾಂತ್ರಿಕ ನಿರ್ದೇಶನಾಲಯ ಪ್ರಾರಂಭಿಸಲು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕೃಷಿ ತಾಂತ್ರಿಕ ನಿರ್ದೇಶನಾಲಯ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಇದೆ; | ಬಂದಿದೆ.<br><br>ರಾಜ್ಯದಲ್ಲಿ ನೂತನವಾಗಿ ಕೃಷಿ ಇಂಜಿನಿಯರಿಂಗ್ ನಿರ್ದೇಶನಾಲಯವನ್ನು ಸ್ಥಾಪಿಸುವ ಕುರಿತು ಅಧ್ಯಯನ ಮಾಡಿ ವರದಿ ಸಲ್ಲಿಸಲು ಕೃಷಿ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿರುತ್ತದೆ. ಸದರಿ ಸಮಿತಿಯ ವರದಿ ಸ್ವೀಕರಿಸಿದ ನಂತರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. |
| ಆ | ಕೃಷಿ ಇಲಾಖೆಯಲ್ಲಿ ಲಭ್ಯವಿರುವ ವಿವಿಧ ವೃಂದದ ಹುದ್ದೆಗಳಿಗೆ ಬಿ.ಟೆಕ್ (ಕೃಷಿ) ಪದವಿ ಪಡೆದ ಅಭ್ಯರ್ಥಿಗಳನ್ನು ಪರಿಗಣಿಸಲು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಇದೆಯೇ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಬಿ.ಟೆಕ್ (ಕೃಷಿ) ಪದವೀಧರರನ್ನು ಸದರಿ ಹುದ್ದೆಗಳಿಗೆ ಪರಿಗಣಿಸಲಾಗುವುದು; | ಕೃಷಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮ (ತಿದ್ದುಪಡಿ) 2022ರನ್ವಯ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ವೃಂದದಲ್ಲಿ ಶೇ.15 ರಷ್ಟು ಹುದ್ದೆಗಳನ್ನು ಬಿ.ಟೆಕ್. (ಆಹಾರ ವಿಜ್ಞಾನ ಮತ್ತು ತಂತ್ರಜ್ಞಾನ/ಬಿ.ಟೆಕ್. ಆಹಾರ ತಂತ್ರಜ್ಞಾನ) ಅಥವಾ ಬಿ.ಎಸ್.ಸಿ.(ಕೃಷಿ ಮಾರುಕಟ್ಟೆ ಮತ್ತು ಸಹಕಾರ)/ಬಿ.ಎಸ್.ಸಿ(ಆನರ್ಸ್) ಕೃಷಿ ಮಾರಾಟ ಮತ್ತು ಸಹಕಾರ/ಬಿ.ಎಸ್.ಸಿ (ಆನರ್ಸ್ ಅಗ್ರಿ ಬಿಸಿನೆಸ್ ಮ್ಯಾನೇಜ್‌ಮೆಂಟ್ ಅಥವಾ ಬಿ.ಎಸ್.ಸಿ (ಕೃಷಿ ಜೈವಿಕ ತಂತ್ರಜ್ಞಾನ) ಬಿ.ಟೆಕ್.ಜೈವಿಕ ತಂತ್ರಜ್ಞಾನ/ಅಥವಾ ಬಿ.ಎಸ್.ಸಿ. (ಅಗ್ರಿಕಲ್ಚರಲ್ ಇಂಜಿನಿಯರಿಂಗ್)/ ಬಿ.ಟೆಕ್ ಅಗ್ರಿ ಕಲ್ಚರಲ್ ಇಂಜಿನಿಯರಿಂಗ್) ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. |
| ಇ | ರಾಜ್ಯದಲ್ಲಿ ಕೃಷಿ ತಾಂತ್ರಿಕ ನಿರ್ದೇಶನಾಲಯ ಪ್ರಾರಂಭಿಸಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ತಾಂತ್ರಿಕ ಅಧಿಕಾರಿ ಹುದ್ದೆ ಸೃಜಿಸಲು ಕೇಂದ್ರ ಸರ್ಕಾರ ನಿರ್ದೇಶನ ನೀಡಿದೆಯೇ; ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆ ಸರ್ಕಾರದ ಮುಂದೆ ಯಾವ ಹಂತದಲ್ಲಿ ಇದೆ? | ರಾಜ್ಯದಲ್ಲಿ ನೂತನವಾಗಿ ಕೃಷಿ ಇಂಜಿನಿಯರಿಂಗ್ ನಿರ್ದೇಶನಾಲಯವನ್ನು ಸ್ಥಾಪಿಸುವ ಕುರಿತು ಅಧ್ಯಯನ ಮಾಡಿ ವರದಿ ಸಲ್ಲಿಸಲು ಕೃಷಿ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿರುತ್ತದೆ. ಸದರಿ ಸಮಿತಿಯ ವರದಿ ಸ್ವೀಕರಿಸಿದ ನಂತರ ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು. |

No.AGRI/380/AGS/2024

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು